**ಸಾಕ್ಷಿಗೆ ದಿನಾಂಕಃ 04.11.2025 ರಂದು ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲುಃ ಶ್ರೀ. ಪಿ.ಎಸ್. ವಕೀಲರಿಂದಃ**

ನಾನು ಬಿ.ಎ.ತನಕ ಓದಿರುತ್ತೇನೆ. ಈ ದಾವೆಯಲ್ಲಿ ಹಾಜರುಪಡಿಸಿದ್ದ ದಾಖಲೆಗಳನ್ನು ಓದಿ ತಿಳಿದುಕೊಂಡಿರುತ್ತೇನೆ. ಪ್ರತಿವಾದ ಪತ್ರವನ್ನು ಓದಿ ತಿಳಿದುಕೊಂಡಿರುತ್ತೇನೆ. ದಾವಾ ಸ್ವತ್ತನ್ನು ನಾನು 2009 ರಲ್ಲಿ 1 ನೇ ಪ್ರತಿವಾದಿಯಿಂದ ಖರೀದಿ ಮಾಡಿರುತ್ತೇನೆ. ಬೇರೆ ಸ್ವತ್ತುಗಳನ್ನು ನಾನು ಖರೀದಿ ಮಾಡಿರುತ್ತೇನೆ. ಸ್ವತ್ತನ್ನು ಖರೀದಿ ಮಾಡುವಾಗ ಅದು ಮೂಲತಃ ಯಾರಿಗೆ ಸೇರಿರುತ್ತದೆ ಎಂದು ಪರಿಶೀಲನೆ ಮಾಡಬೇಕು ಎಂದರೆ ಸರಿ. ದಾವಾ ಸ್ವತ್ತಿನ ಚೆಕ್ಕು ಬಂದಿ ನನಗೆ ಗೊತ್ತು. ದಾವಾ ಸ್ವತ್ತನ್ನು ಖರೀದಿ ಮಾಡುವ ಮೊದಲು ಮಾತುಕತೆ ಆಗಿರುವುದಿಲ್ಲ. ದಾವಾ ಸ್ವತ್ತನ್ನು ಖರೀದಿ ಮಾಡುವ ಮೊದಲು 1 ನೇ ಪ್ರತಿವಾದಿಗೆ ಹೇಗೆ ಬಂತು ಎಂಬುದನ್ನು ಪರಿಶೀಲನೆ ಮಾಡಿರುತ್ತೇನೆ. 1 ನೇ ಪ್ರತಿವಾದಿಗೆ ಸಂಬಂಧಿಸಿದ ವಂಶವೃಕ್ಷ ಮತ್ತು ಎಂ.ಆರ್. ದಾಖಲೆಯನ್ನು ನೋಡಿರುತ್ತೇನೆ. 1 ನೇ ಪ್ರತಿವಾದಿಯ ವಂಶವೃಕ್ಷವನ್ನು ಹಾಜರುಪಡಿಸಿರುವುದಿಲ್ಲ. 1 ನೇ ಪ್ರತಿವಾದಿಯ ತಂದೆಯ ಹೆಸರು ನರಸಿಂಹಯ್ಯ. ನರಸಿಂಹಯ್ಯ ರವರ ಸಹೋದರರ ಬಗ್ಗೆ ನನಗೆ ಗೊತ್ತು.

ದಾವಾ ಸ್ವತ್ತು ಮೂಲತಃ ಸೊಪ್ಪಿನ ಜವರಯ್ಯ ರವರಿಗೆ ಸೇರಿತ್ತು ಎಂದರೆ ಸರಿ. ದಾವಾ ಸ್ವತ್ತು ಸದರಿಯವರಿಂದ 1 ನೇ ಪ್ರತಿವಾದಿಗೆ ಹೇಗೆ ಬಂತು ಎಂಬುದರ ಬಗ್ಗೆ ದಾಖಲೆಯನ್ನು ಹಾಜರುಪಡಿಸಿರುತ್ತೆನೆ. ಸೊಪ್ಪಿನ ಜವರಯ್ಯ ರವರ ಹೆಂಡತಿ ಮತ್ತು ಮಕ್ಕಳ ಬಗ್ಗೆ ನನಗೆ ಗೊತ್ತಿರುವುದಿಲ್ಲ. 1 ನೇ ಪ್ರತಿವಾದಿಯು ಸೊಪ್ಪಿನ ಜವರಯ್ಯ ಎಷ್ಟನೇ ಮಗ ಎಂದು ನನಗೆ ಗೊತ್ತಿರುವುದಿಲ್ಲ. 1 ನೇ ಪ್ರತಿವಾದಿಗೆ ಒಪ್ಪಿಗೆ ಪತ್ರವನ್ನು ಬರೆದುಕೊಟ್ಟಿರುತ್ತಾರೆ. ಸದರಿ ಪತ್ರವನ್ನು ನಾನು ನೋಡಿರುತ್ತೇನೆ. ಖರೀದಿ ಮಾಡುವ ಸಮಯದಲ್ಲಿ ಸದರಿ ಪತ್ರವನ್ನು ಪಡೆದಿರುವುದಿಲ್ಲ. ಸದರಿ ಪತ್ರ ಯಾರ ಬಳಿ ಇರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ನಿ.ಡಿ.1 ರ ಮೂಲ ಪತ್ರ ನನ್ನ ಬಳಿ ಇರುತ್ತದೆ. ಅದನ್ನು ಹಾಜರುಪಡಿಸಲು ತೊಂದರೆ ಇರುವುದಿಲ್ಲ.

ನಿ.ಡಿ.4 ರಂತೆ ಸೊಪ್ಪಿನ ಜವರಯ್ಯ ರವರಿಂದ 1 ನೇ ಪ್ರತಿವಾದಿ ರವರಿಗೆ ಖಾತೆ ಬದಲಾವಣೆ ಆಗಿರುತ್ತದೆ. ನಿ.ಡಿ.4 ರಲ್ಲಿ 1 ನೇ ಪ್ರತಿವಾದಿಯು ಸೊಪ್ಪಿನ ಜವರಯ್ಯ ಮಗ ಎಂದು ನಮೂದು ಆಗಿರುತ್ತದೆ ಎಂದರೆ ಸರಿ. ನನ್ನ ಪ್ರಕಾರ 1 ನೇ ಪ್ರತಿವಾದಿಯ ತಂದೆಯ ಹೆಸರು

ನರಸಿಂಹಯ್ಯ. ನಿ.ಪಿ.12 ರಂತೆ ವಿಭಾಗ ಪತ್ರದ ಆಧಾರದ ಮೇಲೆ 1 ನೇ ಪ್ರತಿವಾದಿಯ ಹೆಸರಿಗೆ ಖಾತೆ ಆಗಿರುತ್ತದೆ ಎಂದು ನಮೂದು ಇರುತ್ತದೆ ಎಂದರೆ ಸರಿ. ವಿಭಾಗ ಪತ್ರವನ್ನು ನಾನು ಪಡೆದಿರುವುದಿಲ್ಲ. ಅದನ್ನು ನಾನು ನೋಡಿರುವುದಿಲ್ಲ. ಒಪ್ಪಿಗೆ ಪತ್ರ ಮತ್ತು ವಿಭಾಗ ಪತ್ರವು 1 ನೇ ಪ್ರತಿವಾದಿಯ ಬಳಿ ಇರುವುದು ನನಗೆ ಗೊತ್ತಿರುವುದಿಲ್ಲ. 1 ನೇ ಪ್ರತಿವಾದಿಯು ಬದುಕಿರುವ ಬಗ್ಗೆ ನನಗೆ ಗೊತ್ತಿರುವುದಿಲ್ಲ. 1 ನೇ ಪ್ರತಿವಾದಿಯ ಹೆಸರಿಗೆ ದಾವಾ ಸ್ವತ್ತನ್ನು ಮಾರಾಟ ಮಾಡಲು ಮೂಲ ದಾಖಲಾತಿಗಳು ಇರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. 2008 ರ ಮೊದಲು ದಾವಾ ಸ್ವತ್ತಿನ ಆರ್.ಟಿ.ಸಿ. ಸೊಪ್ಪಿನ ಜವರಯ್ಯ ಹೆಸರಿನಲ್ಲಿ ಇತ್ತು ಎಂದರೆ ಸರಿ. 1 ನೇ ಪ್ರತಿವಾದಿಯ ಹೆಸರಿಗೆ ದಾವಾ ಸ್ವತ್ತಿನ ಖಾತೆಯು 2008-09 ನೇ ಸಾಲಿನಲ್ಲಿ ಆಗಿರುತ್ತದೆ. ದಾವಾ ಸ್ವತ್ತಿನ ಕೈಬರವಣಿಗೆಯ ಆರ್.ಟಿ.ಸಿ.ಯು ಹಾಗೂ ಕಂದಾಯ ದಾಖಲೆಗಳನ್ನು ನಾನು ಪರಿಶೀಲನೆ ಮಾಡಿರುವುದಿಲ್ಲ.

( ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ನೀಡಲಾಯಿತು)

**(ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಒ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ತಿ.ನರಸೀಪುರ.**